# 2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 03

# ಕರ್ನಾಟಕ ಧನ ವಿನಿಯೋಗ ಅಧಿನಿಯಮ, 2005

## ಪ್ರಕರಣಗಳ ಪಟ್ಟಿ

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು
2. ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2004-2005ನೇ ಹಣಕಾಸು ವರ್ಷಕ್ಕಾಗಿ 93873.07 ಲಕ್ಷ ರೂಪಾಯಿಗಳ ನೀಡಿಕೆ
3. ಧನವಿನಿಯೋಗ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2004-2005ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205 ನೇ (1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

[2005ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 5]

**2005 ರ ಕರ್ನಾಟಕ ಅಧಿನಿಯಮ ಸಂಖ್ಯೆ 03**

**(2005 ರ ಫೆಬ್ರವರಿ ಇಪ್ಪತ್ತೊಂದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)**

**ಕರ್ನಾಟಕ ಧನ ವಿನಿಯೋಗ ಅಧಿನಿಯಮ, 2005**

**(2005 ರ ಫೆಬ್ರವರಿ ಹತ್ತೊಂಭತ್ತನೇ ದಿನಾಂಕದಂದು ರಾಜ್ಯಪಾಲರ ಅನುಮೋದನೆಯನ್ನು ಪಡೆಯಲಾಗಿದೆ)**

2004-2005 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ಅಧಿನಿಯಮ.

2004-2005 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತಾರನೆಯ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು.-** ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ ಅಧಿನಿಯಮ, 2005 ಎಂದು ಕರೆಯತಕ್ಕದ್ದು.

2. **ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2004-2005ನೇ ಹಣಕಾಸು ವರ್ಷಕ್ಕಾಗಿ 93873.07 ಲಕ್ಷ ರೂಪಾಯಿಗಳ ನೀಡಿಕೆ.-** ಅನುಸೂಚಿಯ 2ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾದ ಸೇವೆಗಳ ಸಂಬಂಧದಲ್ಲಿ, 2004-2005ನೇ ಭಾಗದ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿ ಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅನುಸೂಚಿಯ 5ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾಗಿರುವ **ಒಂಭತ್ತು ನೂರು ಮೂವತ್ತೆಂಟು ಕೋಟಿ ಮತ್ತು ಎಪ್ಪತ್ತಮೂರು ಲಕ್ಷ ಮತ್ತು ಏಳು ಸಾವಿರ ರೂಪಾಯಿಗಳಿಗೆ** ಮೀರದಷ್ಟು ಮೊಬಲಗನ್ನು ಮಾತ್ರ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡತಕ್ಕದ್ದು ಮತ್ತು ಉಪಯೋಗಿಸತಕ್ಕದ್ದು.

3. **ಧನವಿನಿಯೋಗ.-** ಈ ಅಧಿನಿಯಮದ ಮೂಲಕ, ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡಲು ಮತ್ತು ಉಪಯೋಗಿಸಲು ಅಧಿಕಾರ ನೀಡಲಾದ ಮೊತ್ತಗಳನ್ನು ಸದರಿ ವರ್ಷಕ್ಕೆ ಸಂಬಂಧಪಟ್ಟಂತೆ ಅನುಸೂಚಿಯಲ್ಲಿ ತಿಳಿಸಲಾದ ಸೇವೆಗಳು ಮತ್ತು ಉದ್ದೇಶಗಳಿಗಾಗಿ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 265 ದಿನಾಂಕ: 21.2.2005 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 11 ಶಾಸನ 2005

**ಅನುಸೂಚಿ**

**(2 ಮತ್ತು 3ನೇ ಪ್ರಕರಣಗಳನ್ನು ನೋಡಿ)**

(ರೂ. ಲಕ್ಷಗಳಲ್ಲಿ)

| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ಮೀರದ ಮೊಬಲಗು | | ಒಟ್ಟು |
|---|---|---|---|---|---|
| | | | ವಿಧಾನಸಭೆಯಿಂದ ಪುರಸ್ಕೃತ ವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | |
| 01 | ಕೃಷಿ ಮತ್ತು ತೋಟಗಾರಿಕೆ | ರಾಜಸ್ವ | 540.00 | - | 540.00 |
| 03 | ಆರ್ಥಿಕ | ರಾಜಸ್ವ | 3118.03 | - | 3118.03 |
| | | ಬಂಡವಾಳ | 575.00 | - | 575.00 |
| 04 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | ರಾಜಸ್ವ | 5.00 | - | 5.00 |
| 05 | ಒಳಾಡಳಿತ ಮತ್ತು ಸಾರಿಗೆ | ರಾಜಸ್ವ | 200.00 | - | 200.00 |
| 06 | ಮೂಲಭೂತ ಸೌಕರ್ಯ | ಬಂಡವಾಳ | 285.00 | - | 285.00 |
| 07 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | ರಾಜಸ್ವ | 6000.00 | - | 6000.00 |
| 08 | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ | ರಾಜಸ್ವ | 398.57 | 3.00 | 401.57 |
| 09 | ಸಹಕಾರ | ರಾಜಸ್ವ | 159.74 | - | 159.74 |
| | | ಬಂಡವಾಳ | 888.50 | | 888.50 |
| 10 | ಸಮಾಜ ಕಲ್ಯಾಣ | ರಾಜಸ್ವ | 2229.10 | - | 2229.10 |
| | | ಬಂಡವಾಳ | 1700.00 | - | 1700.00 |
| 13 | ಆಹಾರ ಮತ್ತು ನಾಗರಿಕ ಸರಬರಾಜು | ರಾಜಸ್ವ | 30000.00 | - | 30000.00 |
| 15 | ಮಾಹಿತಿ ತಂತ್ರಜ್ಞಾನ | ರಾಜಸ್ವ | 26.67 | - | 26.67 |
| 16 | ವಸತಿ | | - | - | - |
| 17 | ಶಿಕ್ಷಣ | ರಾಜಸ್ವ | 200.00 | - | 200.00 |
| 18 | ವಾಣಿಜ್ಯ ಮತ್ತು ಕೈಗಾರಿಕೆ | ರಾಜಸ್ವ | 7865.76 | - | 7865.76 |
| | | ಬಂಡವಾಳ | 4847.00 | - | 4847.00 |
| 20 | ಲೋಕೋಪಯೋಗಿ | ರಾಜಸ್ವ | 10105.43 | - | 10105.43 |
| | | ಬಂಡವಾಳ | 18165.95 | - | 18165.95 |
| 21 | ಜಲಸಂಪನ್ಮೂಲ | ರಾಜಸ್ವ | 142.70 | - | 142.70 |
| | | ಬಂಡವಾಳ | 5345.50 | - | 5345.50 |
| 22 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು | ರಾಜಸ್ವ | 1022.12 | - | 1022.12 |
| 27 | ಕಾನೂನು | ರಾಜಸ್ವ | 50.00 | - | 50.00 |
| | ಒಟ್ಟು | ರಾಜಸ್ವ | **62063.12** | **3.00** | **62066.12** |
| | | ಬಂಡವಾಳ | **31806.95** | | **31806.95** |
| | ಒಟ್ಟು ಜುಮ್ಲಾ | | **93870.07** | **3.00** | **93873.07** |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

**ಜಿ. ದಕ್ಷಿಣಾ ಮೂರ್ತಿ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ